**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**16.05.2026 / 18.40 hrs**
**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ರಾಜ್ಯಕ್ಕೆ ಹೆಚ್ಚುವರಿ ಒಂದು ಸಾವಿರದ ೧೨೨ ವೈದ್ಯಕೀಯ ಸೀಟು ಲಭ್ಯ ; ಸಚಿವ ಶರಣಪ್ರಕಾಶ್ ಪಾಟೀಲ್**

**೨. 'ಒಂದು ರಾಷ್ಟ್ರ ಒಂದು ಚುನಾವಣೆ'ಗೆ ಸಹಮತವಿಲ್ಲ; ಜಂಟಿ ಸಂಸದೀಯ ಅಧ್ಯಯನ ಸಮಿತಿ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಪಾದನೆ**

**೩. ಪ್ರಸಕ್ತ ಸಾಲಿನಲ್ಲಿ ೮೪೪ ಕೋಟಿ ರೂಪಾಯಿ ನಿವ್ವಳ ಲಾಭ ಗಳಿಸಿದ ಹಟ್ಟಿ ಚಿನ್ನದ ಗಣಿ ಕಂಪನಿ**

**೪. ಹಿಜಾಬ್ ವಿಚಾರವನ್ನು ರಾಜಕೀಯಗೊಳಿಸದಂತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮನವಿ**

**೫. ಚಾಮರಾಜನಗರ ಬರಪೀಡಿತ ಜಿಲ್ಲೆ ; ಸರ್ಕಾರಕ್ಕೆ ವರದಿ ಸಲ್ಲಿಸಿದ ಜಿಲ್ಲಾಡಳಿತ**

**<><*<><>*><>**

ರಾಜ್ಯದಲ್ಲಿ ಮೆಡಿಕಲ್ ಸೀಟು ಲಭ್ಯತೆ ಹೆಚ್ಚಾಗಿದ್ದು, ವೈದ್ಯಕೀಯ ಕ್ಷೇತ್ರದಲ್ಲಿ ಸಾಧನೆ ಮಾಡುವ ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ ದೊರೆಯಲಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ಹೆಚ್ಚುವರಿ ಒಂದು ಸಾವಿರದ ೧೨೨ ಸೀಟುಗಳು ದೊರೆಯಲಿವೆ ಎಂದು ಹೇಳಿದ್ದಾರೆ. ೫೦೦ ಹೆಚ್ಚುವರಿ ಯುಜಿ ಎಂ.ಬಿ.ಬಿಎಸ್ ಸೀಟು, ಪಿಜಿ ವಿಭಾಗಕ್ಕೆ ೫೭೨ ಹೊಸ ಸೀಟುಗಳು ಲಭ್ಯವಾಗಲಿದ್ದು, ಈ ಸೀಟುಗಳು ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಹಂಚಿಕೆಯಾಗಲಿವೆ. ಈ ಹೆಚ್ಚುವರಿ ಸೀಟುಗಳು ಕೊಪ್ಪಳ, ಗದಗ, ಚಾಮರಾಜನಗರ, ಕಾರವಾರ, ಹಾವೇರಿ ಸೇರಿದಂತೆ ಇತರ ಜಿಲ್ಲೆಗಳಿಗೆ ದೊರೆಯಲಿದೆ. ಪದವಿಪೂರ್ವ ಸೀಟುಗಳಿಗೆ ಕೇಂದ್ರ ಸರ್ಕಾರದಿಂದ ೪೯೫ ಕೋಟಿ ರೂಪಾಯಿ ಹಾಗೂ ಸ್ನಾತಕೋತ್ತರ ವೈದ್ಯಕೀಯ ಸೀಟುಗಳಿಗೆ ೫೪೧ ಕೋಟಿ ರೂಪಾಯಿ ಅನುದಾನ ಸಿಗಲಿದೆ ಎಂದು ಪಾಟೀಲ್ ಮಾಹಿತಿ ನೀಡಿದ್ದಾರೆ. ಒಂದು ಸಾವಿರ ವೈದ್ಯಕೀಯ ಸೀಟು ರಾಜ್ಯಕ್ಕೆ ಸಿಕ್ಕಿರುವುದು ದಾಖಲೆಯಾಗಿದ್ದು, ರಾಜ್ಯದ ಸಾಧನೆಗೆ ಇದು ಸಾಕ್ಷಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ನೀಟ್ ಅಕ್ರಮದ ಕುರಿತಂತೆ

ಸಿಬಿಐ ತನಿಖೆಯ ಮೇಲೆ ನಂಬಿಕೆಯಿಲ್ಲ. ನ್ಯಾಯಾಂಗ ತನಿಖೆ ನಡೆಸುವಂತೆ ಅವರು ಆಗ್ರಹಿಸಿದ್ದಾರೆ.

<><*<><>*><>

ಒಂದು ರಾಷ್ಟ್ರ ಒಂದು ಚುನಾವಣೆ ಕುರಿತು ಜಂಟಿ ಸಂಸದೀಯ ಅಧ್ಯಯನ ಸಮಿತಿ ಬೆಂಗಳೂರಿನಲ್ಲಿಂದು ಜನಪ್ರತಿನಿಧಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಸಂವಾದ ನಡೆಸಿತು. ಸಂವಾದದಲ್ಲಿ ಸಮಿತಿ ಅಧ್ಯಕ್ಷ ಪಿ.ಪಿ.ಚೌಧರಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ, ಸಚಿವರಾದ ಎಚ್.ಕೆ.ಪಾಟೀಲ್, ಪ್ರಿಯಾಂಕ್ ಖರ್ಗೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭಾಗವಹಿಸಿದ್ದರು. ಈ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇದು ಅಧಿಕಾರ ಕೇಂದ್ರಿತ ರಾಜಕೀಯ ಪ್ರೇರಿತ ಯೋಜನೆಯಾಗಿದ್ದು, ರಾಜ್ಯಗಳನ್ನು ದುರ್ಬಲಗೊಳಿಸುವುದರ ಮೂಲಕ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರಲಿದೆ ಎಂದು ಅಭಿಪ್ರಾಯ ಮಂಡಿಸಿದ್ದಾರೆ. 'ಒಂದು ದೇಶ ಒಂದು ಚುನಾವಣೆ' ವಿರೋಧಿಸಿ ಈಗಾಗಲೇ ರಾಜ್ಯ ವಿಧಾನಸಭೆ ನಿರ್ಣಯವನ್ನು ಅಂಗೀಕರಿಸಿದೆ ಎಂದು ಆ ನಿರ್ಣಯವನ್ನು ಸಂವಾದದಲ್ಲಿ ಓದಿದರು. ವಿವಿಧ ಕಾಲಾವಧಿಯ ಚುನಾವಣೆಗಳನ್ನು ಸಮಯೀಕರಿಸುವುದು ಹೇಗೆ ಎಂದು ಪ್ರಶ್ನಿಸಿದ್ದಾರೆ. ಈ ಪ್ರಸ್ತಾವನೆ ಬಗ್ಗೆ ಕರ್ನಾಟಕ ಸರ್ಕಾರದ ಸಹಮತವಿಲ್ಲ ಎಂದು ಪ್ರತಿಪಾದಿಸಿದ್ದಾರೆ.

<><*<><>*><>

ಹಟ್ಟಿ ಚಿನ್ನದ ಗಣಿ ಕಂಪನಿ ೨೦೨೪-೨೫ನೇ ಸಾಲಿನಲ್ಲಿ ಹೊಂದಿದ್ದ ೧ ಸಾವಿರದ ೭೦೦ ಕೆ.ಜಿ ಚಿನ್ನ ಉತ್ಪಾದಿಸುವ ಗುರಿಗೆ ಶೇಕಡ ೯೯.೫೦ ರಷ್ಟು ಅಂದರೆ ೧ ಸಾವಿರದ ೬೯೧.೫೦ ಕೆ.ಜಿ ಚಿನ್ನ ಉತ್ಪಾದಿಸಿದೆ. ಇದೇ ಮೊದಲ ಬಾರಿಗೆ ೧ ಸಾವಿರದ ೯೧೦ ಕೋಟಿ ರೂಪಾಯಿ ವಹಿವಾಟು ನಡೆಸಿದ್ದು ೮೮೮ ಕೋಟಿ ರೂಪಾಯಿ ನಿವ್ವಳ ಲಾಭಗಳಿಸಿದೆ. ಈ ಹಿನ್ನೆಲೆಯಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯ ಅಧ್ಯಕ್ಷ ಜೆ.ಟಿ ಪಾಟೀಲ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ಭೇಟಿ ಮಾಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಗೃಹ ಸಚಿವ ಜಿ.ಪರಮೇಶ್ವರ್, ವ್ಯವಸ್ಥಾಪಕ ನಿರ್ದೇಶಕಿ ಆರ್.ಶಿಲ್ಪ ಉಪಸ್ಥಿತರಿದ್ದರು.

<><*<><>*><>

ಶಾಲೆಗಳಲ್ಲಿ ಹಿಜಾಬ್ ಧರಿಸುವ ವಿಷಯವನ್ನು ರಾಜಕೀಯಗೊಳಿಸಬೇಡಿ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮನವಿ ಮಾಡಿದ್ದಾರೆ. ಉಡುಪಿಯಲ್ಲಿಂದು ಮಾತನಾಡಿದ ಅವರು, ಇದು ವಿದ್ಯಾರ್ಥಿಗಳ ಹಿತಾಸಕ್ತಿ ಮತ್ತು ಭವಿಷ್ಯಕ್ಕೆ ಧಕ್ಕೆಯಾಗಬಾರದು

ಎಂದು ಅಭಿಪ್ರಾಯಪಟ್ಟಿದ್ದಾರೆ. ವಿದ್ಯಾರ್ಥಿಗಳು ಕಲಿಯಲು ಶಾಲೆಯಲ್ಲಿ ಅನುಕೂಲಕರ ವಾತಾವರಣವಿರಬೇಕು ಎಂದು ತಿಳಿಸಿದ್ದಾರೆ.

**<><*<><>*><>**

ಹಾಸನದಲ್ಲಿಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅಧ್ಯಕ್ಷತೆಯಲ್ಲಿ ಜನಸ್ಪಂದನಾ ಕಾರ್ಯಕ್ರಮದಲ್ಲಿ ಸ್ವೀಕರಿಸಲಾಗಿದ್ದ ಅರ್ಜಿಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲೆಯ ಎಲ್ಲಾ ತಹಸೀಲ್ದಾರ್, ಉಪವಿಭಾಗಾಧಿಕಾರಿಗಳಿಗೆ ಎಲ್ಲಾ ಅರ್ಜಿಗಳನ್ನು ಶೀಘ್ರವೇ ವಿಲೇವಾರಿ ಮಾಡಿ ಜನರು ಕಚೇರಿಗೆ ಅಲೆಯುವುದನ್ನು ತಪ್ಪಿಸಬೇಕು ಎಂದು ಸೂಚನೆ ನೀಡಿದರು. ಜನರ ಸಮಸ್ಯೆಗಳನ್ನು ತಿಳಿದುಕೊಳ್ಳಲು ಜನಸ್ಪಂದನಾ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ ಈ ವೇದಿಕೆಯ ಮೂಲಕ ಬಂದ ಸಮಸ್ಯೆಗಳ ಅರ್ಜಿಗಳನ್ನು ವಿಳಂಭ ಮಾಡದೆ ಜನರಿಗೆ, ರೈತರಿಗೆ ಸ್ಪಂದಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಲತಾಕುಮಾರಿ, ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಶುಭಂಶುಕ್ಲ, ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತ, ಡಿಎಫ್ಓ ಸೌರಭ್ ಕುಮಾರ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ಹೈಕೋರ್ಟ್ ಸಂಚಾರಿ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪಿಸಬೇಕೆಂಬ ಬೇಡಿಕೆಗೆ ರಾಜ್ಯ ಸರ್ಕಾರ ಹಸಿರು ನಿಶಾನೆ ತೋರಿದೆ ಎಂದು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೈಕೋರ್ಟ್ ಪೀಠ ಸ್ಥಾಪನೆಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿದ್ಧವಿರುವುದಾಗಿ ಮುಖ್ಯ ನ್ಯಾಯಾಧೀಶರಿಗೆ ಪತ್ರದ ಮೂಲಕ ತಿಳಿಸಿದ್ದಾರೆ. ಪೀಠ ಸ್ಥಾಪನೆಯ ಶೇಕಡ ೮೦ರಷ್ಟು ಕಾರ್ಯ ಈಗಾಗಲೇ ಪೂರ್ಣಗೊಂಡಿದೆ ಎಂದು ಹೇಳಿದ್ದಾರೆ.

**<><*<><>*><>**

ಚಾಮರಾಜನಗರವನ್ನು ಬರಪೀಡಿತ ಜಿಲ್ಲೆಯನ್ನಾಗಿ ಘೋಷಿಸಬೇಕು ಎಂದು ಜಿಲ್ಲಾಡಳಿತ ಸರ್ಕಾರಕ್ಕೆ ವರದಿ ಸಲ್ಲಿಸಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆ ಸಮಸ್ಯೆ ಪರಿಶೀಲಿಸಿ ಮಾತನಾಡಿದ ಅವರು, ಹನೂರು ತಾಲೂಕಿನ ೪೭ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಗಮನಕ್ಕೆ ಬಂದಿದೆ. ಕುಡಿಯುವ ನೀರು ಪೂರೈಕೆ ಮಾಡಲು ತ್ವರಿತ ಕ್ರಮ ವಹಿಸಲು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು

ಹೇಳಿದ್ದಾರೆ. ಚಾಮರಾಜನಗರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಜಿಲ್ಲಾಡಳಿತ ಸರ್ಕಾರಕ್ಕೆ ವರದಿ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟ ಸಚಿವರ ಜೊತೆ ಚರ್ಚೆ ನಡೆಸಿ ಸೂಕ್ತ ಕ್ರಮ ವಹಿಸುವುದಾಗಿ ಭರವಸೆ ನೀಡಿದ್ದಾರೆ.

**<><*<><>*><>**

ವಿಜಯಪುರ ಜಿಲ್ಲೆಯ ತಾಪಮಾನ ಈ ವರ್ಷ ೪೯ ಡಿಗ್ರಿ ಸೆಲ್ಸಿಯಸ್ ಮೀರಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಟಿ ವೃಕ್ಷ ಅಭಿಯಾನದ ಪ್ರತಿಫಲವಾಗಿ  ಜಿಲ್ಲೆಯ ತಾಪಮಾನ ೪೦ ಡಿಗ್ರಿ ಸೆಲ್ಸಿಯಸ್ ಮೀರದಿರುವುದು ಆಶಾದಾಯಕ ಬೆಳವಣಿಗೆಯಾಗಿದೆ.  ಕೋಟಿ ವೃಕ್ಷ ಅಭಿಯಾನದಡಿ, ಜಿಲ್ಲೆಯ ಆಲಮಟ್ಟಿ ಅಣೆಕಟ್ಟಿನ ಸಮೀಪ ನರ್ಸರಿಯನ್ನು ಆರಂಭಿಸಲಾಗಿದೆ ಎಂದು ಹೇಳಿದ್ದಾರೆ.  ಗಿಡ ನೆಟ್ಟು, ನಿರ್ವಹಣೆ ಮಾಡುವುದರ ಮೂಲಕ ವಿಜಯಪುರಕ್ಕೆ ಹೊಸ ಸೌಂದರ್ಯ ಕಲ್ಪಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವುದಾಗಿ ಭರವಸೆ ನೀಡಿದ್ದಾರೆ.

**<><*<><>*><>**

ವಿಜಯನಗರ ಜಿಲ್ಲೆಯ ಮರಿಯಮ್ಮನಹಳ್ಳಿ ಹೋಬಳಿಯ ನಂದಿಬಂಡಿ ಗ್ರಾಮದಲ್ಲಿ ಜೀತ ಪದ್ಧತಿಯಲ್ಲಿ ಸಿಲುಕಿದ್ದ ಒಡಿಶಾ ಮೂಲದ ೩೭ ಕಾರ್ಮಿಕರನ್ನು ರಕ್ಷಿಸಲಾಗಿದೆ. ಬೆಳಗಾವಿ ಜಿಲ್ಲೆಯ ಎನ್‌ಜಿಓ ಸಂಸ್ಥೆ ನೀಡಿದ ಖಚಿತ ಮಾಹಿತಿಯ ಮೇರೆಗೆ  ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಸಹಾಯಕ ಆಯುಕ್ತರು ನಂದಿಬಂಡಿ ಗ್ರಾಮದ ಮೇಲೆ ದಾಳಿ ನಡೆಸಿ, ಕಾರ್ಮಿಕರನ್ನು ರಕ್ಷಿಸಿದ್ದಾರೆ. ದಾಳಿಯ ವೇಳೆ  ಒಡಿಶಾದ  ಬಲಂಗೀರ್ ಮತ್ತು ನವರಂಗ್‌ಪುರ ಜಿಲ್ಲೆಗೆ ಸೇರಿದ  ಕಾರ್ಮಿಕರು ಪುಟ್ಟ ಮನೆಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಿಲ್ಲದೆ ದಯನೀಯ ಸ್ಥಿತಿಯಲ್ಲಿ ಬದುಕುತ್ತಿದ್ದರು ಎಂದು ತಿಳಿದು ಬಂದಿದೆ.

**<><*<><>*><>**

ಮುಂಗಾರು ಅವಧಿಯಲ್ಲಿ ಉಂಟಾಗಬಹುದಾದ ವಿದ್ಯುತ್ ವ್ಯತ್ಯಯ ಹಾಗೂ ತುರ್ತು ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಸೆಸ್ಕ್ ಸಂಪೂರ್ಣ ಸನ್ನದ್ಧವಾಗಿರಬೇಕು ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಹಾಗೂ ಪ್ರಾದೇಶಿಕ ಆಯುಕ್ತರೂ ಆಗಿರುವ ನಿತೇಶ್ ಪಾಟೀಲ್ ಸೂಚನೆ ನೀಡಿದ್ದಾರೆ. ಮೈಸೂರಿನಲ್ಲಿ ಇಂದು ಸೆಸ್ಕ್ ವ್ಯಾಪ್ತಿಯ ಐದು ಜಿಲ್ಲೆಗಳ ಉಪ ವಿಭಾಗಗಳ ವ್ಯಾಪ್ತಿಯ ದೂರುಗಳ ನಿರ್ವಹಣೆ, ವಿದ್ಯುತ್ ಅಡಚಣೆಗಳು, ಸಾರ್ವಜನಿಕ ಸಂಪರ್ಕ ವ್ಯವಸ್ಥೆ ಹಾಗೂ ಅಗತ್ಯವಿರುವ ಸಾಮಗ್ರಿಗಳ ಸಂಗ್ರಹ ಕುರಿತು ಮಾಹಿತಿ ಪಡೆದುಕೊಂಡಿದ್ದಾರೆ. ಬಳಿಕ ಮಾತನಾಡಿದ ಅವರು, "ಮುಂಗಾರು ಸಂದರ್ಭದಲ್ಲಿ ಉಂಟಾಗುವ ಸಮಸ್ಯೆಗಳನ್ನು ಎದುರಿಸಲು ಸೆಸ್ಕ್ ಸನ್ನದ್ಧವಾಗಿದೆ

ಎಂಬ ವಿಶ್ವಾಸ ಜನರಲ್ಲಿ ಮೂಡಬೇಕು. ಸಾರ್ವಜನಿಕರು ಸಂಪರ್ಕಿಸಲು ಸಾಧ್ಯವಾಗದಿದ್ದರೆ ಸಮಸ್ಯೆ ಪರಿಹರಿಸಲು ಸಾಧ್ಯವಿಲ್ಲ. ಆದ್ದರಿಂದ ದೂರು ಸ್ವೀಕಾರ ಮತ್ತು ಸ್ಪಂದನಾ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಐತಿಹಾಸಿಕ ಗುಮ್ಮಟ ನಗರಿ ವಿಜಯಪುರದಲ್ಲಿ ಇದೇ ಮೊದಲ ಬಾರಿಗೆ ನಾಳೆಯಿಂದ ರಾಜ್ಯಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ರಾಜ್ಯಾಧ್ಯಕ್ಷ ಕುಮಾರ ಬಂಗಾರಪ್ಪ ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ರಾಜ್ಯದ ವಿವಿಧ ಭಾಗಗಳಿಂದ ೭೫೮ ಕ್ರೀಡಾಪಟುಗಳು ನೋಂದಾಯಿಸಿಕೊಂಡಿದ್ದು, ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಆಟಗಾರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

**<><*<><>*><>**

ಧಾರವಾಡ ಜಿಲ್ಲೆಯಲ್ಲಿ ರಾತ್ರಿ ಸಮಯದಲ್ಲಿ ನಡೆಯುವ ಕಳ್ಳತನ ಹಾಗೂ ಸ್ವತ್ತಿನ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಧಾರವಾಡ ಜಿಲ್ಲಾ ಪೊಲೀಸ್ ವತಿಯಿಂದ ಲಾಕ್ಡ್ ಹೌಸ್ ಬೀಟ್ ಸಿಸ್ಟಮ್‌ನ್ನು ಕಲಘಟಗಿ, ಅಳ್ನಾವರ, ಕುಂದಗೋಳ ಪಟ್ಟಣ ಪಂಚಾಯತಿ ಹಾಗೂ ಅಣ್ಣಿಗೇರಿ ಮತ್ತು ನವಲಗುಂದ ಪುರಸಭೆ ವ್ಯಾಪ್ತಿಯಲ್ಲಿ ಜಾರಿಗೆ ತರಲಾಗುತ್ತಿದೆ. ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಕುರಿತ ಮಾಹಿತಿವುಳ್ಳ ಭಿತ್ತಿಪತ್ರವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ತಮ್ಮ ಕಚೇರಿಯಲ್ಲಿ ಇಂದು ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು, ಈ ವಿನೂತನ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

**<><*<><>*><>**

೧. ಬಳ್ಳಾರಿಯಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗದಿಂದ 'ರಾಷ್ಟ್ರೀಯ ಡೆಂಘಿ ದಿನಾಚರಣೆ ಅಂಗವಾಗಿ ಜಾಗೃತಿ ಜಾಥಾ' ಹಮ್ಮಿಕೊಂಡಿತ್ತು.

೨. ಸೋಮವಾರದಿಂದ ಇದೇ ೨೫ ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-೨ ಯನ್ನು ವ್ಯವಸ್ಥಿತವಾಗಿ ನಡೆಸಲು ಕ್ರಮವಹಿಸಬೇಕೆಂದು ಗದಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>